# ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮಂಜುನಾಥ ಭಂಡಾರಿ ರವರು ನಿಯಮ 330 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನಾ ಪತ್ರಕ್ಕೆ ಮಾನ್ಯ ಮುಖ್ಯಮಂತ್ರಿಯವರ ಉತ್ತರ.**

**ವಿಷಯ:** ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಇಲಾಖೆಯ ಸ್ಥಳೀಯ ಆಡಳಿತ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳನ್ನು ಸರ್ಕಾರಿ ನೌಕರರೆಂದು ಪರಿಗಣಿಸುವ ಬಗ್ಗೆ.

*****

**ಉತ್ತರ:** ಭಾರತ ಸಂವಿಧಾನದ ಅನುಚ್ಛೇದ 243 ಬಿ ರಂತೆ ಗ್ರಾಮ ಪಂಚಾಯತಿಯು ರಚನೆಗೊಂಡಿರುತ್ತದೆ. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 2(21) ರಂತೆ ಗ್ರಾಮ ಪಂಚಾಯತಿಯು ಸ್ಥಳೀಯ ಪ್ರಾಧಿಕಾರವಾಗಿದ್ದು, ಸದರಿ ಅಧಿನಿಯಮದ, ಪ್ರಕರಣ 112 ರಡಿ ಸರ್ಕಾರವು ಆದೇಶದ ಮೂಲಕ ಗ್ರಾಮ ಪಂಚಾಯತಿ ಸಿಬ್ಬಂದಿ ವರ್ಗದ ಮಾದರಿ, ನೇಮಕಾತಿ ವಿಧಾನ ಮತ್ತು ವೇತನ ಶ್ರೇಣಿ ನಿಗಧಿಪಡಿಸಿದ್ದು, ಅದರಂತೆ ಮಂಜೂರಾದ ಹುದ್ದೆಗಳಿಗೆ ಗ್ರಾಮ ಪಂಚಾಯತಿಯು ಪ್ರಕರಣ 113 ರಂತೆ ನೇಮಕಾತಿ ಮಾಡಿಕೊಂಡು, ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಅನುಮೋದನೆ ಪಡೆದುಕೊಂಡು ಕರ್ತವ್ಯ ನಿರ್ವಹಿಸುತ್ತಿರುವ ನೌಕರರು ಸ್ಥಳೀಯ ಪ್ರಾಧಿಕಾರವಾದ ಗ್ರಾಮ ಪಂಚಾಯತಿಯ ಖಾಯಂ ನೌಕರರಾಗಿರುತ್ತಾರೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 113 ರಂತೆ ಗ್ರಾಮ ಪಂಚಾಯತಿಯ ಸಿಬ್ಬಂದಿಗಳ ವೇತನವನ್ನು ಗ್ರಾಮ ಪಂಚಾಯತಿ ನಿಧಿಯಿಂದ ಅಂದರೆ ಸ್ವಂತ ಸಂಪನ್ಮೂಲದಿಂದ ಪಾವತಿಸುವುದು, ಪ್ರತಿಯೊಂದು ಗ್ರಾಮ ಪಂಚಾಯತಿಯ ಕರ್ತವ್ಯವಾಗಿರುತ್ತದೆ.

ಆದಾಗ್ಯೂ ರಾಜ್ಯದ ಹಲವಾರು ಗ್ರಾಮ ಪಂಚಾಯತಿಗಳಲ್ಲಿ ಸಂಪನ್ಮೂಲದ ಕೊರತೆಯಿಂದ ಸಮಯಕ್ಕೆ ಸರಿಯಾಗಿ ಸಿಬ್ಬಂದಿಗಳ ವೇತನ ಪಾವತಿಸದ ಕಾರಣ ರಾಜ್ಯ ಹಣಕಾಸು ಆಯೋಗದ ಅನುದಾನಡಿ ಸರ್ಕಾರವು ಗ್ರಾಮ ಪಂಚಾಯತಿಗಳಿಗೆ ಪ್ರಸಕ್ತ ಸಾಲಿನಲ್ಲಿ ಬಿಡುಗಡೆ ಮಾಡುವ ಅನುದಾನದಲ್ಲಿ ಭಾಗಶಃ ವೇತನಕ್ಕಾಗಿ ಪ್ರತ್ಯೇಕ ಅನುದಾನವನ್ನು ಅಂದರೆ ರೂ.811.00 ಕೋಟಿಗಳನ್ನು 4 ತ್ರೈಮಾಸಿಕ ಕಂತುಗಳಲ್ಲಿ ಬಿಡುಗಡೆ ಮಾಡುತ್ತಿದೆ. ಜುಲೈ 2022 ರಿಂದ ಗ್ರಾಮ ಪಂಚಾಯತಿ ಸಿಬ್ಬಂದಿಗಳಿಗೆ ಬಿ.ಎಂ.ಎಸ್. ಮುಖಾಂತರ ವೇತನ ಪಾವತಿ ಮಾಡಲಾಗುತ್ತಿದೆ.

ಪ್ರಸ್ತುತ ಗ್ರಾಮ ಪಂಚಾಯಿತಿ ನೌಕರರಿಗೆ ಸಂಬಂಧಿಸಿದಂತೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿ ಸಿಬ್ಬಂದಿ ಸ್ವರೂಪ, ವೇತನ ಶ್ರೇಣಿಗಳು, ನೇಮಕಾತಿ ವಿಧಾನ ಮತ್ತು ಇತರೆ ಸೇವಾ ಷರತ್ತುಗಳು) ನಿಯಮಗಳು, 2020 ನ್ನು ರೂಪಿಸಲಾಗಿರುತ್ತದೆ.

ಅದರಂತೆ, ಗ್ರಾಮ ಪಂಚಾಯತ್ ಸಿಬ್ಬಂದಿಗೆ ವಾರ್ಷಿಕವಾಗಿ 10 ದಿನಗಳ ಸಾಂದರ್ಭಿಕ ರಜೆ, 2 ದಿನಗಳ ನಿರ್ಬಂಧಿತ ರಜೆ, ವಾರ್ಷಿಕವಾಗಿ 30 ದಿನಗಳ ಗಳಿಕೆ ರಜೆ, ಮಹಿಳಾ ನೌಕರರಿಗೆ, 180 ದಿನಗಳ ಪ್ರಸೂತಿ ರಜೆ, ಪುರುಷ ನೌಕರರಿಗೆ 15 ದಿನಗಳ ಪಿತೃತ್ವ ರಜೆ ಮಂಜೂರು ಮಾಡಲು ಅವಕಾಶ ಕಲ್ಪಿಸಲಾಗಿದೆ.

ಸೇವೆಯಿಂದ ನಿವೃತ್ತಿಯಾಗುವ ಸಿಬ್ಬಂದಿಗೆ ಅಥವಾ ಸೇವೆಯಲ್ಲಿ ಮರಣ ಹೊಂದಿದ ಸಿಬ್ಬಂದಿಯ ನ್ಯಾಯಬದ್ಧ ಅವಲಂಬಿತರಿಗೆ ಅವರುಗಳು ಸಲ್ಲಿಸಿದ ಸೇವಾ ಅವಧಿಯ ಆಧಾರದ ಮೇಲೆ ಒಂದು ವರ್ಷದ ಸೇವೆಗೆ 15 ದಿನಗಳ ವೇತನದಂತೆ ಒಟ್ಟು 20 ತಿಂಗಳ ವೇತನ ಮೀರದಂತೆ ನಿವೃತ್ತಿ ಹಾಗೂ ಮರಣೋತ್ತರ ಉಪದಾನಗಳನ್ನು ನೀಡಲಾಗುತ್ತಿದೆ.

ಗ್ರಾಮ ಪಂಚಾಯತಿ ನೌಕರನು ಸೇವೆಯಲ್ಲಿರುವಾಗಲೇ ಮರಣ ಹೊಂದಿದಲ್ಲಿ ಅವರ ಅವಲಂಬಿತರು ಅನುಕಂಪದ ಆಧಾರದ ಮೇಲೆ ನೇಮಕಾತಿ ಹೊಂದಲು ಅರ್ಹರಿದ್ದಲ್ಲಿ, ಗ್ರಾಮ ಪಂಚಾಯತಿಗಳಲ್ಲಿ ಖಾಲಿ ಇರುವ ಹುದ್ದೆಗೆ ಬೇರೆ ಅಭ್ಯರ್ಥಿಗಳನ್ನು ನೇಮಿಸಿಕೊಳ್ಳುವುದರ ಬದಲು, ಸೇವೆಯಲ್ಲಿರುವಾಗಲೇ ಮರಣ ಹೊಂದಿದ ಅವರ ಅವಲಂಬಿತರನ್ನು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಅನುಮೋದನೆಯನ್ನು ಪಡೆದು ಗ್ರಾಮ ಪಂಚಾಯತಿಗಳು ಅನುಕಂಪದ ಆಧಾರದ ಮೇಲೆ ನೇಮಿಸಲು ಅಗತ್ಯ ಕ್ರಮ ವಹಿಸುವಂತೆ ಎಲ್ಲಾ ಗ್ರಾಮ ಪಂಚಾಯತಿಗಳಿಗೆ ನಿರ್ದೇಶನ ನೀಡಿದೆ.

ಗ್ರಾಮ ಪಂಚಾಯತಿ ಸಿಬ್ಬಂದಿ ವರ್ಗದವರಿಗೆ ಅನಿರೀಕ್ಷಿತ ಸಂದರ್ಭಗಳಲ್ಲಿ ಅಪಘಾತಗಳಾಧಲ್ಲಿ ಅವರ ಅವಲಂಬಿತ ಕುಟುಂಬ ಸದಸ್ಯರಿಗೆ ಆರ್ಥಿಕ ಭದ್ರತೆ ಒದಗಿಸುವ ಹಿತದೃಷ್ಟಿಯಿಂದ ಈ ಕೆಳಕಂಡ ಪ್ರಧಾನ ಮಂತ್ರಿಯವರ "ಜನ್‌ಧನ್" ಯೋಜನೆಯಡಿಯ ವಿಮಾ ಪಾಲಿಸಿಗಳನ್ನು ಕಡ್ಡಾಯವಾಗಿ ಮಾಡಿಸಲು ಮತ್ತು ಸಂಬಂಧಿಸಿದ ಸಿಬ್ಬಂದಿಗಳ ವೇತನದ ಬ್ಯಾಂಕ್ ಖಾತೆಗೆ ಲಿಂಕ್ ಮಾಡಿಸಿ, ವಾರ್ಷಿಕವಾಗಿ ಕಟಾವಣೆ ಮಾಡಲು ಅಗತ್ಯ ಕ್ರಮಕೈಗೊಳ್ಳಲು ಗ್ರಾಮ ಪಂಚಾಯಿತಿಗಳಿಗೆ ತಿಳಿಸಲಾಗಿದೆ.

1) ಪ್ರಧಾನ ಮಂತ್ರಿ ಜೀವನ್ ಜ್ಯೋತಿ ಭೀಮಾ ಯೋಜನೆ
2) ಪ್ರಧಾನ ಮಂತ್ರಿ ಸುರಕ್ಷಾ ಜ್ಯೋತಿ ಭೀಮಾ ಯೋಜನೆ
3) ಭಾರತೀಯ ಸ್ಟೇಟ್ ಬ್ಯಾಂಕ್‌ನ ಗ್ರೂಪ್ ಫರ್ಸನಲ್ ಆಕ್ಸಿಡೆಂಟ್ ಇನ್‌ಶ್ಯೂರೆನ್ಸ್

ಗ್ರಾಮ ಪಂಚಾಯತಿ ನೌಕರರಿಗೆ ಕಾರ್ಮಿಕ ಇಲಾಖೆಯು ಕಾಲಕಾಲಕ್ಕೆ ನಿಗಧಿಪಡಿಸುವ ಕನಿಷ್ಠ ವೇತನ ಮತ್ತು ತುಟ್ಟಿಭತ್ಯೆಯನ್ನು ಗ್ರಾಮ ಪಂಚಾಯತಿಯು ಪಾವತಿಸುತ್ತಿದೆ. ಪ್ರಸ್ತುತ ನಿಗದಿಪಡಿಸಿರುವ ಕನಿಷ್ಠ ವೇತನ ಮತ್ತು ತುಟ್ಟಿಭತ್ಯೆ ಈ ಕೆಳಕಂಡಂತಿದೆ.

| ಕ್ರ ಸಂ. | ಹುದ್ದೆಯ ಹೆಸರು | ದಿನಾಂಕ:28-07-2022 ರಿಂದ ದಿನಾಂಕ: 31-03-2023 ಸಾಲಿಗೆ ಪ್ರತಿ ಹುದ್ದೆಗೆ ನಿಗದಿಪಡಿಸಿರುವ ಕನಿಷ್ಠ ವೇತನ ಮತ್ತು ತುಟ್ಟಿಭತ್ಯೆ (ರೂ.ಗಳಲ್ಲಿ) |
|---|---|---|
| 1 | ಬಿಲ್ ಕಲೆಕ್ಟರ್ | 16135 |
| 2 | ಕ್ಲರ್ಕ್, ಕ್ಲರ್ಕ್/ಡಾಟಾ ಎಂಟ್ರಿ ಆಪರೇಟರ್ | 16135 |
| 3 | ವಾಟರ್ ಆಪರೇಟರ್ | 14447 |
| 4 | ಅಟೆಂಡೆಂಟ್ | 13811 |
| 5 | ಕ್ಲೀನರ್ಸ್ | 16957 |
| | ಒಟ್ಟು | |

ಗ್ರಾಮ ಪಂಚಾಯತಿ ನೌಕರರು ಸರ್ಕಾರಿ ನೌಕರರಾಗಿರುವುದಿಲ್ಲ. ಸದರಿ ನೌಕರರು ಸ್ಥಳೀಯ ಪ್ರಾಧಿಕಾರವಾದ ಗ್ರಾಮ ಪಂಚಾಯತಿಯ ನೌಕರರಾಗಿದ್ದು, "ಸಿ" ಮತ್ತು "ಡಿ" ದರ್ಜೆ ನೌಕರರೆಂದು ಪರಿಗಣಿಸಿ ಸರ್ಕಾರಿ ನೌಕರರಂತೆ ವೇತನ ಶ್ರೇಣಿ ನಿಗಧಿಪಡಿಸಲು ಆಡಳಿತಾತ್ಮಕವಾಗಿ ಸಾಧ್ಯವಾಗುವುದಿಲ್ಲ.

ಸಂಖ್ಯೆ: ಗ್ರಾಅಪ 104 ಗ್ರಾಪಂಅ 2023

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ